# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು - 572 103

ಸಂಖ್ಯೆ:ತುವಿ:ಶೈವಿ:2018-19: 3955 ದಿನಾಂಕ:15.02.2019

"ಅತಿ ತುರ್ತು"

## :ಸುತ್ತೋಲೆ:

ವಿಷಯ: 2019 ರ ಲೋಕಸಭಾ ಚುನಾವಣಾ ಸಂಬಂಧ ಕ್ಯಾಂಪಸ್ ಅಂಬಾಸಡರ್‌ಗಳನ್ನು ನೇಮಿಸುವ ಕುರಿತು.

**ಉಲ್ಲೇಖ:** ಅಧ್ಯಕ್ಷರು, ಸ್ವೀಪ್ ಸಮಿತಿ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ , ಜಿಲ್ಲಾ ಪಂಚಾಯತ್, ತುಮಕೂರು ಇವರ ಪತ್ರ ಸಂಖ್ಯೆ:ತುಜಿಪ/ಅಭಿ/ಸ್ವೀಪ್/ಸಿ.ಎ/03/2018-19 ದಿನಾಂಕ:13.02.2019

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ 2019 ರ ಲೋಕಸಭಾ ಚುನಾವಣಾ ಸಂಬಂಧ ಮತದಾರರಿಗೆ ಜಾಗೃತಿ ಮೂಡಿಸುವ ಸಲುವಾಗಿ ಪದವಿ ಪೂರ್ವ ಮತ್ತು ಪದವಿ ಕಾಲೇಜು ಮಟ್ಟದಲ್ಲಿ ಮತದಾರರ ಜಾಗೃತಿ ಕಾರ್ಯಕ್ರಮಗಳ ಅಂಗವಾಗಿ ಕಾಲೇಜು ಮಟ್ಟದ ಕ್ಯಾಂಪಸ್ ಅಂಬಾಸಡರ್‌ಗಳನ್ನು ನೇಮಿಸಲು ಭಾರತ ಚುನಾವಣಾ ಆಯೋಗ ಸೂಚಿಸಿದ್ದು, ಈ ಸಂಬಂಧ ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಇಬ್ಬರು ವಿದ್ಯಾರ್ಥಿಗಳ ಹೆಸರನ್ನು ಸಲ್ಲಿಸುವಂತೆ ಕೋರಿರುತ್ತಾರೆ (ಪ್ರತಿ ಲಗತ್ತಿಸಿದೆ).

ಈ ಸಂಬಂಧ, ತಮ್ಮ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ **ಇಬ್ಬರು ವಿದ್ಯಾರ್ಥಿಗಳ ಹೆಸರನ್ನು** ಕೆಳಕಂಡ ನಮೂನೆಯಲ್ಲಿ ನಮೂದಿಸಿ **ದಿನಾಂಕ:15.02.2019 ರ ಸಂಜೆ 05.00 ಗಂಟೆಯೊಳಗೆ ಅಧ್ಯಕ್ಷರು, ಸ್ವೀಪ್ ಸಮಿತಿ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ , ಜಿಲ್ಲಾ ಪಂಚಾಯತ್, ತುಮಕೂರು ಇವರಿಗೆ ಸಲ್ಲಿಸಿ** ಅದರ ಪ್ರತಿಯನ್ನು ವಿಶ್ವವಿದ್ಯಾನಿಲಯದ ಇ-ಮೇಲ್ (**tumkuruniversity2004@gmail.com**) ವಿಳಾಸಕ್ಕೆ ತಪ್ಪದೇ ಕಳುಹಿಸಿಕೊಡಲು ಈ ಮೂಲಕ ತಮಗೆ ತಿಳಿಸಲಾಗಿದೆ.

| Sl. No. | Name of the College | Name of the Campus Ambassador | Mobile No. |
|---|---|---|---|
| | | | |
| | | | |

ಕುಲಸಚಿವರು

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

ಪ್ರಾಂಶುಪಾಲರು, ಘಟಕ ಹಾಗೂ ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು- **ಸುತ್ತೋಲೆಯನ್ನು** ಅಂತರ್ಜಾಲದಲ್ಲಿ ಪ್ರಕಟಿಸುವುದು ಹಾಗೂ ಎಲ್ಲಾ ಕಾಲೇಜುಗಳಿಗೆ ಇಮೇಲ್ ಮಾಡಲು ಸೂಚಿಸಿದೆ.
3. ಕಚೇರಿ ಪ್ರತಿ.